CollegeDekho
Discover • Prepare • Achieve



Subject Code : **01 (NS)**

## KANNADA

Time : 3 Hours 15 Minutes] [Total No. of questions : 55] [Max. Marks : 100

### ಅ–ವಿಭಾಗ

I. ಕೆಳಗಿನ **ಎಲ್ಲಾ** ಪ್ರಶ್ನೆಗಳಿಗೆ **ಒಂದೊಂದು** ಪೂರ್ಣ ವಾಕ್ಯದಲ್ಲಿ ಉತ್ತರಿಸಿ. **(10 × 1 = 10)**

1) ಗುರು ಹೇಗೆ ವರ್ತಿಸಬಾರದು?

2) ಧರ್ಮರಾಯನಿಗೆ ಎಂಥ ಗರ ಹೊಡೆದಿದೆ?

3) ಹೊರಲೋಕವನ್ನು ಪರಿಚಯಿಸಿ ಎಚ್ಚರಿಕೆ ಕೊಟ್ಟವಳು ಯಾರು?

4) ತೈಲ ತೀರಿದ್ದು ಹೇಗೆ ತಿಳಿಯುತ್ತದೆ?

5) ಮಾರ್ಷನ ಜೊತೆಗಾರನ ಹೆಸರೇನು?

6) ಬೆಳ್ಳಿಲೋಟವನ್ನು ಲಪಟಾಯಿಸಿದ ಅಪವಾದವನ್ನು ಯಾರ ಮೇಲೆ ಹೊರಿಸಲಾಯಿತು?

7) ವಿಜ್ಞಾನದ ಅಡಿಪಾಯ ಯಾವುದು?

8) ಕೃಷ್ಣೇಗೌಡರ ಆನೆ ಮೊದಲು ಯಾವ ಮಠದಲ್ಲಿತ್ತು?

9) ನಿರೂಪಕರ ಪ್ರಕಾರ ಮುನ್ಸಿಪಾಲಿಟಿ ಪ್ರೆಸಿಡೆಂಟರ ಕರ್ತವ್ಯ ಯಾವುದು?

10) ರೇಂಜರ್ ಆನೆಗೆ ಶೂಟ್ ಮಾಡುವಂತೆ ಯಾರಿಗೆ ಸೂಚಿಸಿದರು?

### ಆ–ವಿಭಾಗ

II. (ಅ) **ಯಾವುದಾದರೂ ನಾಲ್ಕು** ಪ್ರಶ್ನೆಗಳಿಗೆ **ಎರಡು–ಮೂರು** ವಾಕ್ಯಗಳಲ್ಲಿ ಉತ್ತರಿಸಿ. **(4 × 2 = 8)**

11) ರಾವಣ ತನ್ನ ಅಂತಃಪುರದ ಸ್ತ್ರೀಯರನ್ನು ಹೇಗೆ ಸಂತೈಸಿದನು?

12) ಯಾರಿಗೆ ತತ್ವಜ್ಞಾನ ಹೇಳಿ ಪ್ರಯೋಜನವಿಲ್ಲ? ಏಕೆ?

13) ಬಾನು ಮತ್ತು ಮರದ ನಿತ್ಯನೂತನತೆಯ ಬಗ್ಗೆ ಕವಿ ಏನು ಹೇಳಿದ್ದಾರೆ?

14) ಎಣ್ಣೆಯಲ್ಲಿ ನೆನೆದು ಉರಿವ ಬತ್ತಿಯನ್ನು ಯಾವ ಯಾವುದಕ್ಕೆ ಹೋಲಿಸಲಾಗಿದೆ?

15) ಕವಯಿತ್ರಿ ನಗುವ ನಗು ಎಂತಹದು?

(ಆ) **ಯಾವುದಾದರೂ ಮೂರು** ಪ್ರಶ್ನೆಗಳಿಗೆ **ಎರಡು–ಮೂರು** ವಾಕ್ಯಗಳಲ್ಲಿ ಉತ್ತರಿಸಿ.

**(3 × 2 = 6)**

16) ಕನ್ನಡದ ಸಮಸ್ಯೆಗಳು ಎಲ್ಲಿವರೆಗೂ ಇದ್ದೇ ಇರುತ್ತವೆ?

17) ಮುಂಜಾನೆ ಚಿನ್ನಮ್ಮ ಯಾವ ಕೆಲಸದಲ್ಲಿ ತೊಡಗಿದ್ದಳು?

18) ಕಲಾಂ ಅವರು ತಾವು ಆತ್ಮಕಥೆ ಬರೆದುದು ಏತಕ್ಕಾಗಿ?

19) 'ನೀರಿಳಿಯದ ಗಂಟಲಲ್ಲಿ ಕಡಬನ್ನು ತುರುಕಿದಂತಾಯ್ತು' ಎಂದು ಮನೋರಮೆ ಹೇಳಿದ್ದೇಕೆ?

(ಇ) **ಯಾವುದಾದರೂ ಮೂರು** ಪ್ರಶ್ನೆಗಳಿಗೆ **ಎರಡು–ಮೂರು** ವಾಕ್ಯಗಳಲ್ಲಿ ಉತ್ತರಿಸಿ.

**(3 × 2 = 6)**

20) ದುರ್ಗಪ್ಪ ಏಕೆ ಬಂದಿರಬಹುದೆಂದು ನಿರೂಪಕರು ಯೋಚಿಸಿದರು?

21) ಕಾಡಾನೆಗಳ ಹಾವಳಿಗೆ ಪ್ರಕಾಶ್ ನೀಡಿದ ಕಾರಣಗಳೇನು?

CollegeDekho www.collegedekho.com



22) ತನ್ನ ಕೆಲಸ ಅತ್ಯಂತ ಅಪಾಯಕಾರಿಯೆಂದು ದುರ್ಗಪ್ಪ ವಿವರಿಸಿದ್ದು ಹೇಗೆ?

23) ಆನೆಯನ್ನು ಹದ್ದುಬಸ್ತಿನಲ್ಲಿಡುವುದರ ಬಗ್ಗೆ ವೇಲಾಯುಧನ ಅಪ್ಪ ಏನು ತಿಳಿಸಿದರು?

## ಇ–ವಿಭಾಗ

III. (ಅ) **ಯಾವುದಾದರೂ ಎರಡು** ವಾಕ್ಯಗಳಿಗೆ ಸಂದರ್ಭ ಸೂಚಿಸಿ, ಸ್ವಾರಸ್ಯ ಬರೆಯಿರಿ. **(2 × 3 = 6)**

24) ಮರ್ಕಟನ ಕೈಯಲ್ಲಿ ಮಾಣಿಕ್ಯವಿದ್ದು ಫಲವೇನು?

25) ಜ್ಯೋತಿ ನಿನ್ನಾರ ಹೋಲರ.

26) ಬಲೆಬೀಸಿ ಬಂದ,ಅಗೋ ಬೆಳಕು–ಬೇಟೆಗಾರ.

(ಆ) **ಯಾವುದಾದರೂ ಒಂದು** ವಾಕ್ಯದ ಕುರಿತು ಸಂದರ್ಭ ಸೂಚಿಸಿ, ಸ್ವಾರಸ್ಯ ಬರೆಯಿರಿ. **(1 × 3 = 3)**

27) ಕಾರ್ಮಿಕರು ಕೆಂಪು ಬಾವುಟ ಹಿಡಿದು ಹೋರಾಟಕ್ಕೆ ಸಜ್ಜಾಗಿದ್ದಾರೆ.

28) ನಿನಗಾವ ರಸದೊಳಿಷ್ಟಂ?

(ಇ) **ಯಾವುದಾದರೂ ಒಂದು** ವಾಕ್ಯದ ಕುರಿತು ಸಂದರ್ಭ ಸೂಚಿಸಿ, ಸ್ವಾರಸ್ಯ ಬರೆಯಿರಿ. **(1 × 3 = 3)**

29) ಆನೆಗೂ ಮಾನ ಮರ್ಯಾದೆ ಇರುತ್ತೆ ತಿಳುಕೊ.

30) ಈ ಕಂಬದೊಳ್ಗೆ ಏನೋ ಸೇರ್‌ಕೊಂಡಿದೆ.

## ಈ–ವಿಭಾಗ

IV. (ಅ) **ಯಾವುದಾದರೂ ಮೂರು** ಪ್ರಶ್ನೆಗಳಿಗೆ **ಐದು–ಆರು** ವಾಕ್ಯಗಳಲ್ಲಿ ಉತ್ತರಿಸಿ. **(3 × 4 = 12)**

31) ದ್ರೌಪದಿ ಅವಮಾನಕ್ಕೊಳಗಾದ ಮೂರು ಪ್ರಸಂಗಗಳನ್ನು ವಿವರಿಸಿ.

32) ವೀರ, ಮಂತ್ರಿ, ರಾಜ ಮತ್ತು ಯೋಗಿಗಳಿಗೆ ಇರಬೇಕಾದ ಅರ್ಹತೆಗಳೇನು?

33) ಶಿಲುಬೆಗೇರಿದ ಜೀಸಸ್‌ನ ದೇಹ ಏನನ್ನು ಹೇಳುವಂತಿದೆ? ವಿವರಿಸಿ.

34) ಮುದುಕನ ಕುರಿತು ಮುದುಕಿಯ ನೆನಕೆಗಳೇನು?

(ಆ) **ಯಾವುದಾದರೂ ಎರಡು** ಪ್ರಶ್ನೆಗಳಿಗೆ **ಐದು–ಆರು** ವಾಕ್ಯಗಳಲ್ಲಿ ಉತ್ತರಿಸಿ. **(2 × 4 = 8)**

35) ಕಣ್ಣುನೋವು ಶುರುವಾದ ಆರಂಭದಲ್ಲಿ ಬಸಲಿಂಗ ಪಡೆದುಕೊಂಡ ಚಿಕಿತ್ಸೆ ಯಾವ ರೀತಿಯದು?

36) ಸೀತಾ ಎಂಬ ಗೆಳತಿಯ ಗುಣ–ಸ್ವಭಾವವನ್ನು ಲೇಖಕಿ ಹೇಗೆ ಚಿತ್ರಿಸಿದ್ದಾರೆ?

37) ಪಟ್ಟಣದ ಚಹಾದಂಗಡಿಗಳು ಹೇಗಿರುತ್ತವೆ?

(ಇ) **ಯಾವುದಾದರೂ ಎರಡು** ಪ್ರಶ್ನೆಗಳಿಗೆ **ಐದು–ಆರು** ವಾಕ್ಯಗಳಲ್ಲಿ ಉತ್ತರಿಸಿ. **(2 × 4 = 8)**

38) ಆನೆ ಮತ್ತು ಮಾವುತ ವೇಲಾಯುಧನನ್ನು ಸಾಗಹಾಕಲು ಮಠದವರು ಹವಣಿಸಿದ್ದೇಕೆ?

39) ನಿದ್ರೆ ಮಂಪರಿನಲ್ಲಿದ್ದ ಡ್ರೈವರ್ ಪರಂಧಾಮಕ್ಕೆ ಹೋದ ಸಂದರ್ಭವನ್ನು ವಿವರಿಸಿ.

40) ಡ್ರೈವರ್ ಅಬ್ಬಾಸ್ ಮತ್ತು ಕ್ಲೀನರ್ ಕೃಷ್ಣನ ಸಾವಿಗೆ ಕೃಷ್ಣೇಗೌಡರ ಆನೆ ಕಾರಣವೆ? ಚರ್ಚಿಸಿ.

## ಉ–ವಿಭಾಗ

V. ಯಾವುದಾದರೂ **ಒಂದು** ಪದ್ಯದ ಭಾವಾರ್ಥ ಬರೆಯಿರಿ. **(1 × 5 = 5)**

41) ಇರದುಯ್ದಿೞಿಗಳೆ ಕೊಟ್ಟೊಡೆನ್ನ ಕಡುಪುಂಕಟ್ಟಾಯಮುಂ ಬೀರಮುಂ
ಬಿರುದುಂ ಬೀಸರಮಕ್ಕುಮೋಸರಿಸಿದಂತಾಗಿರ್ಕುಮಂತಾಗದಂ
ತಿರೆ ದೋರ್ಗರ್ವಮನಿರ್ವಲಂ ಪೊಗೞ್ವಿನಂ ಸೌಮಿತ್ರಿಯುಂ ರಾಮನುಂ
ವಿರಥರ್ಮಾಡಿ ರಣಾಗ್ರದೊಳ್ ಪಿಡಿದು ತಂದಾಂ ಕೊಟ್ಟಪೆಂ ಸೀತೆಯಂ

42) ವಿದ್ಯೆ: ಶಾಲೆಕಾಲೇಜುಗಳು ಕಲಿಸಿದ್ದು; ದಾರಿ ಬದಿ

ನೂರಾರು ಜಾಹೀರಾತುಗಳು ತಲೆಗೆ ತುರುಕಿದ್ದು;

ರೇಡಿಯೊ ಸಿಲೋನ್ ವ್ಯಾಪಾರ ವಿಭಾಗ ಶಿಫಾರಸು ಮಾಡಿದ್ದು,

ನೀನಾಗಿ ಕಲಿತದ್ದು ಬಲುಕಡಿಮೆ, ಬಸ್‌ಸ್ಟಾಪಿನಲಿ ನಿಂತ

ಬಣ್ಣಗಳ ಕಡೆಗೆ ಕಣ್ಣಾಡಿಸುವುದೊಂದನ್ನು ಹೊರತು.

## ಭಾಷಾಭ್ಯಾಸ

VI. (ಅ) ಕೆಳಗಿನ ಪ್ರಶ್ನೆಗಳಲ್ಲಿ **ಯಾವುದಾದರೂ ಆರಕ್ಕೆ** ಸೂಚನೆಗೆ ಅನುಗುಣವಾಗಿ ಉತ್ತರಿಸಿ.

**(6 × 2 = 12)**

43) ಈ ಪದಗಳಿಗೆ ಅರ್ಥ ಬರೆಯಿರಿ.

ಹೆದೆ, ದಾರಂದ .

44) ಈ ಪದಗಳ ನಾನಾರ್ಥಗಳನ್ನು ಬರೆಯಿರಿ.

ಹೊಳೆ, ಬಟ್ಟೆ.

45) ಈ ಪದಗಳ ತದ್ಭವ ರೂಪವನ್ನು ಬರೆಯಿರಿ.

ಲಕ್ಷ, ಯಶ.

46) ಈ ಪದಗಳ ಗುಣವಾಚಕವನ್ನು ಗುರುತಿಸಿ.

ಹಿತವಚನ, ಹುಸಿನಿದ್ದೆ .

47) ಈ ಪದಗಳಲ್ಲಿನ ವಿಭಕ್ತಿಯನ್ನು ಹೆಸರಿಸಿ.

ಇವರಂ, ಕಟ್ಟಿಗೆಯ.

48) ಈ ಕ್ರಿಯಾಪದಗಳ ಕಾಲವನ್ನು ಸೂಚಿಸಿ.

ಹೋಗುವರು, ನೋಡುತ್ತಾಳೆ.

49) ಈ ದ್ವಿರುಕ್ತಿಗಳನ್ನು ವಾಕ್ಯದಲ್ಲಿ ಬಳಸಿ.

ಅಡಿಗಡಿಗೆ, ತುತ್ತತುದಿ.

(ಆ) ಇವುಗಳಲ್ಲಿ **ಯಾವುದಾದರೂ ಒಂದನ್ನು** ಕುರಿತು ಪ್ರಬಂಧವನ್ನು ಬರೆಯಿರಿ. **(1 × 5 = 5)**

50) ತ್ಯಾಜ್ಯ ವಸ್ತುಗಳ ಮರುಬಳಕೆ.

51) ಹೆಚ್ಚುತ್ತಿರುವ ವೃದ್ಧಾಶ್ರಮಗಳು.

(ಇ) ಇವುಗಳಲ್ಲಿ **ಯಾವುದಾದರೂ ಒಂದನ್ನು** ಕುರಿತು ಪತ್ರ ಬರೆಯಿರಿ. **(1 × 4 = 4)**

52) ನಿಮ್ಮ ಕಾಲೇಜಿನಲ್ಲಿ ಆಚರಿಸಿದ ಕನ್ನಡ ರಾಜ್ಯೋತ್ಸವವನ್ನು ಕುರಿತು ಗೆಳೆಯ/ಗೆಳತಿಗೆ ಪತ್ರ ಬರೆಯಿರಿ.

53) ನಿಮ್ಮೂರಿನಲ್ಲಿ ಒಂದು ಗ್ರಂಥಾಲಯವನ್ನು ತೆರೆಯಲು ಕೋರಿ ಮುಖ್ಯ ಗ್ರಂಥಪಾಲಕರಿಗೊಂದು ಪತ್ರ ಬರೆಯಿರಿ.

(ಈ) ಈ ಕೆಳಗಿನ ಗಾದೆಗಳಲ್ಲಿ **ಒಂದನ್ನು** ವಿಸ್ತರಿಸಿ ಬರೆಯಿರಿ. **(1 × 4 = 4)**

54) ಆಳಾಗಿ ದುಡಿ, ಅರಸಾಗಿ ಉಣ್ಣು

55) ಪ್ರತ್ಯಕ್ಷ ಕಂಡರೂ ಪ್ರಮಾಣಿಸಿ ನೋಡು.